ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01**

ಸಂಖ್ಯೆ: ಸಿ5(5)ಆ.ಋ.ಪ-02/2018-19 ದಿನಾಂಕ: 23-04-2019

**ಸುತ್ತೋಲೆ**

ವಿಷಯ: ಬೋಧಕೇತರ ವೃಂದದ ಅಧಿಕಾರಿಗಳು/ನೌಕರರು ಆಸ್ತಿ ಮತ್ತು ಋಣಪಟ್ಟಿಯನ್ನು ನಿಯಮಿಸಲಾದ ಪ್ರಾಧಿಕಾರಕ್ಕೆ ಸಲ್ಲಿಸುವ ಬಗ್ಗೆ.

********

ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮ 1966 ರ ನಿಯಮ 23 ಮತ್ತು ಅದರ ಉಪ ನಿಯಮಗಳನ್ವಯ ಎಲ್ಲಾ ಸರ್ಕಾರಿ ನೌಕರರು ಪ್ರತಿ ವರ್ಷ ಮಾರ್ಚ್ 31 ರಲ್ಲಿದ್ದಂತೆ ತನ್ನ ಹಾಗೂ ತನ್ನ ಕುಟುಂಬದ ಆಸ್ತಿ ಮತ್ತು ಹೊಣೆಗಾರಿಕೆಗಳನ್ನು ಸರ್ಕಾರವು ನಿಗಧಿ ಪಡಿಸಿದ ನಮೂನೆಯಲ್ಲಿ ಪ್ರತಿ ವರ್ಷ ಸಲ್ಲಿಸುವುದು ಕಡ್ಡಾಯವಾಗಿರುತ್ತದೆ.

ಅದರನ್ವಯ. ನಿಯಮ 23(5)(3) (iii) ರಂತೆ ಸಮೂಹ 'ಬಿ' ವೃಂದದ ಹುದ್ದೆಯನ್ನು ಧಾರಣ ಮಾಡಿರುವ ಸರ್ಕಾರಿ ನೌಕರರು ನಿಯಮಿಸಿದ ಪ್ರಾಧಿಕಾರವಾದ ಇಲಾಖಾ ಮುಖ್ಯಸ್ಥರಿಗೆ ಆಸ್ತಿ ಋಣದಾಯಿತ್ವದ ವಿವರಗಳನ್ನು ಸಲ್ಲಿಸಬೇಕಾಗಿರುತ್ತದೆ.

ನಿಯಮ 23(5)(3) (vi) ರಂತೆ ಗ್ರೂಪ್ 'ಸಿ' ಮತ್ತು ಗ್ರೂಪ್ 'ಡಿ' ನೌಕರರು, ಕಛೇರಿ ಮುಖ್ಯಸ್ಥರಿಗೆ ಆಸ್ತಿ ಮತ್ತು ಋಣದಾಯಿತ್ವದ ವಿವರಗಳನ್ನು ಸಲ್ಲಿಸಬೇಕಾಗಿರುತ್ತದೆ. ನಿಯಮಿತ ಪ್ರಾಧಿಕಾರಿಗಳಾದ ಕಛೇರಿ ಮುಖ್ಯಸ್ಥರು ಸದರಿ ಸಿಬ್ಬಂದಿಗಳ ಆಸ್ತಿ ಮತ್ತು ಋಣದಾಯಿತ್ವದ ವಿವರಗಳನ್ನು ಪರಿಶೀಲಿಸಿ ಅಗತ್ಯ ಕ್ರಮ ವಹಿಸಬೇಕಾಗಿರುತ್ತದೆ.

ಈ ಹಿನ್ನಲೆಯಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕೇತರ ವೃಂದದ ಪತ್ರಾಂಕಿತ ಸಹಾಯಕರ, ಪತ್ರಾಂಕಿತ ವ್ಯವಸ್ಥಾಪಕರ ವೃಂದದ ಅಧಿಕಾರಿಗಳ ಕುಟುಂಬದ ಆಸ್ತಿ ಮತ್ತು ಋಣದಾಯಿತ್ವದ ವಿವರಗಳನ್ನು ಗ್ರೂಪ್ ಬಿ ಹುದ್ದೆಗೆ ಬಂದ ದಿನಾಂಕದಿಂದ ಡೋಸಿಯರ್ಸ್‌ಗಳನ್ನು ಸಿದ್ಧಪಡಿಸಿ ತಪ್ಪದೇ ಈ ಕಛೇರಿಗೆ ಸಲ್ಲಿಸುವುದು.

ಈ ಕಛೇರಿಯ ಬೋಧಕೇತರ ವೃಂದದ ಎಲ್ಲಾ ಅಧಿಕಾರಿ/ನೌಕರರು ಆಸ್ತಿ ಮತ್ತು ಋಣದಾಯಿತ್ವದ ವಿವರಗಳನ್ನು ಕಛೇರಿ ಸಿಬ್ಬಂದಿ ಶಾಖೆಗೆ 7 ದಿನಗಳ ಒಳಗಾಗಿ ಸಲ್ಲಿಸಲು ತಿಳಿಸಿದೆ.

ಆಸ್ತಿ ಮತ್ತು ಋಣದಾಯಿತ್ವದ ವಿವರಗಳನ್ನು ಸಲ್ಲಿಸದ ಅಧಿಕಾರಿಗಳ/ನೌಕರರ ವಿರುದ್ಧ ಅನಿವಾರ್ಯವಾಗಿ ಕರ್ನಾಟಕ ನಾಗರೀಕ ಸೇವಾ(ಸಿ.ಸಿ.ಎ) ನಿಯಮಗಳು 1957 ಹಾಗೂ ಕರ್ನಾಟಕ ನಾಗರೀಕ ಸೇವಾ ನಡತೆ ನಿಯಮಗಳು 1966 ರ ನಿಯಮ 3 (i) (ii) (iii) ರಂತೆ ಶಿಸ್ತು ಕ್ರಮ ಜರುಗಿಸಲಾಗುವುದು.

(ಅರುಳ್ ಕುಮಾರ್)
ಜಂಟಿ ನಿರ್ದೇಶಕರು (ಆಡಳಿತ)

**ಪ್ರತಿಯನ್ನು ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ :**

1. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ ಹಾಗೂ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ, ಬೆಂಗಳೂರು.

2. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ, ಬೆಂಗಳೂರು
3. ನಿರ್ದೇಶಕರು[ಪರೀಕ್ಷೆಗಳು] ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು.
4. ನಿರ್ದೇಶಕರು, ಉರ್ದು ಮತ್ತು ಇತರೆ ಅಲ್ಪ ಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ, ಬೆಂಗಳೂರು
6. ವಿಭಾಗೀಯ ಕಾರ್ಯದರ್ಶಿಗಳು ಹಾಗೂ ಪದನಿಮಿತ್ತ ಜಂಟಿ ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮೈಸೂರು ವಿಭಾಗ, ಮೈಸೂರು.
7. ಜಂಟಿ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಬೆಂಗಳೂರು.
8. ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯ ವ್ಯಾಪ್ತಿಯ ಸಿ.ಟಿಇ. ಪ್ರಾಂಶುಪಾಲರಿಗೆ.
9. ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯ ವ್ಯಾಪ್ತಿಯ ಜಿಲ್ಲಾ ಉಪ ನಿರ್ದೇಶಕರು (ಆಡಳಿತ)
10. ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯ ವ್ಯಾಪ್ತಿಯ ಡಯಟ್ ಉಪ ನಿರ್ದೇಶಕರು (ಅಭಿವೃದ್ಧಿ)
11. ಉಪ ನಿರ್ದೇಶಕರು, ಶಿಕ್ಷಕರ ಕಲ್ಯಾಣ ನಿಧಿ ಕಛೇರಿ, ಬೆಂಗಳೂರು.
12. ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯ ವ್ಯಾಪ್ತಿಯ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ [ಜಿಲ್ಲಾ ಉಪ ನಿರ್ದೇಶಕರು (ಆಡಳಿತ) ರವರ ಮುಖೇನ]
13. ಮಾನ್ಯ ಆಯುಕ್ತರ ಆಪ್ತ ಕಾರ್ಯದರ್ಶಿಗಳಿಗೆ.
14. ಈ ಕಛೇರಿಯ ನಿರ್ದೇಶಕರು/ ಸಹ ನಿರ್ದೇಶಕರ ಆಪ್ತ ಸಹಾಯಕರಿಗೆ.
15. ಈ ಕಛೇರಿಯ ಎಲ್ಲಾ ಅಧಿಕಾರಿಗಳು/ಶಾಖಾಧಿಕಾರಿಗಳು/ನೌಕರರಿಗೆ.
16. ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರಿಗೆ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ)
17. ಕಛೇರಿ ಪ್ರತಿ.